**All India Radio: Bangalore**
**National Bulletins In Kannada**
**13.05.2025 / 19.35**

ಆಕಾಶವಾಣಿ, ಬೆಂಗಳೂರು

**ರಾಷ್ಟ್ರೀಯ ವಾರ್ತೆಗಳು**

**<><*<><>*><>**

ಮುಖ್ಯಾಂಶಗಳು

**೧. ಪಾಕಿಸ್ತಾನದಲ್ಲಿ ಭಯೋತ್ಪಾದಕರು ಶಾಂತಿಯಿಂದ ಉಸಿರಾಡಲು ಯಾವುದೇ ಸ್ಥಳ ಉಳಿದಿಲ್ಲ- ಪ್ರಧಾನಿ ನರೇಂದ್ರ ಮೋದಿ**

**೨. ದೆಹಲಿಯಲ್ಲಿಂದು ದೇಶದ ಭದ್ರತೆ ಕುರಿತು ರಕ್ಷಣಾ ಸಚಿವರ ನೇತೃತ್ವದಲ್ಲಿ ಉನ್ನತಮಟ್ಟದ ಸಭೆ**

**೩. ಪಂಜಾಬ್‌ನಲ್ಲಿ ಕಳ್ಳಬಟ್ಟಿ ದುರಂತ; ಮೃತರ ಸಂಖ್ಯೆ ೨೧ ಕ್ಕೆ ಏರಿಕೆ**

**೪. ಐಪಿಎಲ್ ಟಿ-೨೦ ಕ್ರಿಕೆಟ್; ಉಳಿದ ಪಂದ್ಯಗಳು ಶನಿವಾರದಿಂದ ಪನರಾರಂಭ**

**<><*<><>*><>**

ಪಾಕಿಸ್ತಾನದಲ್ಲಿ ಭಯೋತ್ಪಾದಕರು ಶಾಂತಿಯಿಂದ ಉಸಿರಾಡಲು ಯಾವುದೇ ಸ್ಥಳ ಉಳಿದಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಅವರು ಇಂದು ಪಂಜಾಬ್‌ನ ಆದಂಪುರ್ ವಾಯುನೆಲೆಗೆ ಭೇಟಿ ನೀಡಿ ಯೋಧರೊಂದಿಗೆ ಸಂವಾದ ನಡೆಸಿದರು. ಯೋಧರಿಗೆ ಪ್ರಧಾನಿ ಧೈರ್ಯ ತುಂಬಿದರು. ಈ ವೇಳೆ ಮಾತನಾಡಿದ ಅವರು, ಭಾರತವು, ಭಯೋತ್ಪಾದಕರನ್ನು ಅವರ ಮನೆಯಲ್ಲಿಯೇ ನಿರ್ಮೂಲನೆ ಮಾಡುವ ಸಾಮರ್ಥ್ಯ ಹೊಂದಿದೆ ಎಂದರು. ಆಪರೇಷನ್ 'ಸಿಂದೂರ' ಯಶಸ್ಸಿಗೆ ಶುಭ ಹಾರೈಸಿದ ಅವರು, ಭಾರತವು ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿ ೯ ಭಯೋತ್ಪಾದಕ ಶಿಬಿರಗಳನ್ನು ನಾಶಪಡಿಸಿದ್ದು, ನೂರಕ್ಕೂ ಹೆಚ್ಚು ಉಗ್ರರನ್ನು ಹೊಡೆದುರುಳಿಸಿದೆ ಎಂದು ಹೇಳಿದರು. ಭಯೋತ್ಪಾದಕರು ಅವಲಂಬಿಸಿದ್ದ ಪಾಕಿಸ್ತಾನ ಸೇನೆಯನ್ನು, ಭಾರತೀಯ ಸೇನೆ ಸೋಲಿಸಿದೆ. ಮುಗ್ಧ ಜನರನ್ನು ಅಮಾನುಶವಾಗಿ ಹತ್ಯೆ ಮಾಡಿದ ಫಲಿತಾಂಶ ವಿನಾಶ ಮತ್ತು ಸಂಪೂರ್ಣ ವಿನಾಶ ಎಂಬುದನ್ನು ಭಯೋತ್ಪಾದನೆಯನ್ನು ಪೋಷಿಸುವವರು ಈಗ ಅರಿತಿದ್ದಾರೆ ಎಂದು ಪ್ರತಿಪಾದಿಸಿದರು. ಆಪರೇಷನ್ ಸಿಂದೂರ ಸಮಯದಲ್ಲಿ ರಾಷ್ಟ್ರವನ್ನು ರಕ್ಷಿಸುವಲ್ಲಿ ಸಶಸ್ತ್ರ ಪಡೆಗಳ ಧೈರ್ಯ, ಶೌರ್ಯ ಮತ್ತು ವೃತ್ತಿಪರತೆಯನ್ನು ಪ್ರಧಾನಿ ಶ್ಲಾಘಿಸಿದರು. ಆಪರೇಷನ್ ಸಿಂದೂರ್ ದೇಶದ ನೈತಿಕತೆಯನ್ನು ಹೆಚ್ಚಿಸಿದೆ, ದೇಶವನ್ನು ಒಗ್ಗೂಡಿಸಿದೆ ಮತ್ತು ಭಾರತದ ಗಡಿಗಳನ್ನು ರಕ್ಷಿಸಿದೆ ಎಂದರು. ಭಾರತೀಯ

ವಾಯುಪಡೆಯು ಪಾಕಿಸ್ತಾನಕ್ಕೆ ನುಸುಳಿ ಭಯೋತ್ಪಾದಕ ನೆಲೆಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿವೆ. ಕೇವಲ ೧೦ ರಿಂದ ೧೫ ನಿಮಿಷಗಳಲ್ಲಿ ಗಡಿಯಾಚೆಗಿನ ಗುರಿಗಳನ್ನು ಹೊಡೆದುರುಳಿಸಿವೆ. ಅತ್ಯಾಧುನಿಕ ತಂತ್ರಜ್ಞಾನ ಹೊಂದಿರುವ ವೃತ್ತಿಪರ ಪಡೆಯು ಇದನ್ನು ಸಾಧಿಸಬಹುದು ಎಂಬುದನ್ನು ತೋರಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ೨೫ ಸೆಕೆಂಡ್ಸ್)**

**<><*<><>*><>**

ರಕ್ಷಣಾ ಸಚಿವ ರಾಜನಾಥ್ ಸಿಂಗ್ ದೆಹಲಿಯಲ್ಲಿಂದು ದೇಶದ ಭದ್ರತಾ ಸ್ಥಿತಿಗತಿ ಕುರಿತಂತೆ ಉನ್ನತ ಮಟ್ಟದ ಸಭೆ ನಡೆಸಿದರು. ಸಭೆಯಲ್ಲಿ ಸೇನಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್, ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ನೌಕಾಪಡೆ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ. ತ್ರಿಪಾಠಿ, ವಾಯುಪಡೆ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್ ಅಮರ್ ಪ್ರೀತ್ ಸಿಂಗ್ ಮತ್ತು ಉನ್ನತಾಧಿಕಾರಿಗಳು ಉಪಸ್ಥಿತರಿದ್ದರು. ಸಭೆಯಲ್ಲಿ ಭಾರತ-ಪಾಕ್ ಗಡಿಯಲ್ಲಿನ ಪರಿಸ್ಥಿತಿ ಹಾಗೂ ಶೋಪಿಯಾನ್‌ನಲ್ಲಿಂದು ಭಯೋತ್ಪಾದಕರ ವಿರುದ್ಧ ನಡೆದ ಕಾರ್ಯಾಚರಣೆ ಮತ್ತಿತರ ವಿಷಯಗಳ ಕುರಿತು ಅಧಿಕಾರಿಗಳು ಸಚಿವರಿಗೆ ಮಾಹಿತಿ ನೀಡಿದರು.

**<><*<><>*><>**

ಜಮ್ಮು ಮತ್ತು ಕಾಶ್ಮೀರ ಕೇಂದ್ರಾಡಳಿತ ಪ್ರದೇಶಕ್ಕೆ ಸಂಬಂಧಿಸಿದ ಯಾವುದೇ ವಿಷಯಗಳ ಬಗ್ಗೆ ಭಾರತವು ದೀರ್ಘಕಾಲದ ರಾಷ್ಟ್ರೀಯ ನಿಲುವನ್ನು ಹೊಂದಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಜಮ್ಮು-ಕಾಶ್ಮೀರಕ್ಕೆ ಸಂಬಂಧಿಸಿದಂತೆ ಭಾರತದ ನೀತಿ ಬದಲಾಗಿಲ್ಲ. ಪಾಕಿಸ್ತಾನವು ಅಕ್ರಮವಾಗಿ ಆಕ್ರಮಿಸಿಕೊಂಡಿರುವ ಭಾರತದ ಪ್ರದೇಶವನ್ನು ಬಿಟ್ಟುಕೊಡುವುದೊಂದೇ ಈಗ ಉಳಿದಿರುವ ವಿಷಯವಾಗಿದೆ. ಈ ಸಮಸ್ಯೆಗಳನ್ನು ಭಾರತ ಮತ್ತು ಪಾಕಿಸ್ತಾನ ದ್ವಿಪಕ್ಷೀಯವಾಗಿ ಪರಿಹರಿಸಬೇಕಾಗುತ್ತದೆ ಎಂದು ಹೇಳಿದರು.

**<><*<><>*><>**

ಭಾರತ ಮತ್ತು ಪಾಕಿಸ್ತಾನ ನಡುವೆ ಹೆಚ್ಚುತ್ತಿರುವ ಸಂಘರ್ಷ ನಿಲ್ಲಿಸಿರುವುದಾಗಿ ಹಾಗೂ ಎರಡೂ ದೇಶಗಳೊಂದಿಗೆ ವಾಣಿಜ್ಯ ವಹಿವಾಟು ವೃದ್ಧಿಗೆ ತಾವು ಕಾರ್ಯನಿರ್ವಹಿಸುವುದಾಗಿ ಹೇಳಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿಕೆಯನ್ನು ಭಾರತ ತಳ್ಳಿಹಾಕಿದೆ. ಈ ತಿಂಗಳ ೯ ರಂದು ಪ್ರಧಾನಿ ನರೇಂದ್ರ ಮೋದಿ ಮತ್ತು ಅಮೆರಿಕ ಉಪಾಧ್ಯಕ್ಷ ಜೆ.ಡಿ.ವಾನ್ಸ್ ನಡುವೆ ನಡೆದ ಮಾತುಕತೆಗಳಲ್ಲಿ ವಾಣಿಜ್ಯ ವಹಿವಾಟು ಕುರಿತು ಉಲ್ಲೇಖವಿಲ್ಲ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ಆಪರೇಷನ್ ಸಿಂದೂರ ಕಾರ್ಯಾಚರಣೆ ಆರಂಭವಾದ

ನಂತರ, ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೋ ರುಬಿಯೋ ಅವರು ಈ ತಿಂಗಳ ೮ ಮತ್ತು ೧೦ರಂದು ವಿದೇಶಾಂಗ ಸಚಿವ ಡಾ.ಎಸ್. ಜೈಶಂಕರ್ ಅವರೊಂದಿಗೆ ಹಾಗೂ ೧೦ರಂದು ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ಧೋವಲ್ ಅವರೊಂದಿಗೆ ಚರ್ಚಿಸಿದ್ದಾರೆ. ಈ ಮಾತುಕತೆಗಳಲ್ಲಿ ವಾಣಿಜ್ಯ ವಹಿವಾಟು ಕುರಿತು ಪ್ರಸ್ತಾಪವಾಗಿಲ್ಲ ಎಂದು ಸಚಿವಾಲಯ ತಿಳಿಸಿದೆ. ಕದನ ವಿರಾಮಕ್ಕೆ ಒಪ್ಪಿಕೊಳ್ಳಲು ಭಾರತ ಮತ್ತು ಪಾಕಿಸ್ತಾನ ನಡುವೆ ವಾಣಿಜ್ಯ ವಹಿವಾಟು ವೃದ್ಧಿಗೆ ತಾವು ಭರವಸೆ ನೀಡುತ್ತಿರುವುದಾಗಿ ಡೊನಾಲ್ಡ್ ಟ್ರಂಪ್ ಸುದ್ದಿಗೋಷ್ಠಿಯಲ್ಲಿ ಹೇಳಿದ್ದರು.

<><*<><>*><>

೨೦೧೩-೧೪ರಲ್ಲಿ ೨.೫೩ ಲಕ್ಷ ಕೋಟಿ ರೂಪಾಯಿಗಳಿದ್ದ ರಕ್ಷಣಾ ಬಜೆಟ್, ೨೦೨೫-೨೬ರಲ್ಲಿ ೬.೮೧ ಲಕ್ಷ ಕೋಟಿ ರೂಪಾಯಿಗಳಿಗೆ ಏರಿಕೆಯಾಗಿದೆ ಎಂದು ಕೇಂದ್ರ ಸರ್ಕಾರ ಇಂದು ತಿಳಿಸಿದೆ. ಕಾರ್ಯತಂತ್ರದ ಸುಧಾರಣೆಗಳು, ಖಾಸಗಿ ವಲಯದ ಭಾಗವಹಿಸುವಿಕೆ ಮತ್ತು ನಾವೀನ್ಯತೆಗಳು ಸ್ಥಳೀಯ ಉತ್ಪಾದನೆಯನ್ನು ಹೆಚ್ಚಿಸಿ, ಭಾರತವನ್ನು ಸ್ವಾವಲಂಬಿ, ಜಾಗತಿಕ ವಿಶ್ವಾಸಾರ್ಹ ರಕ್ಷಣಾ ರಫ್ತುದಾರನನ್ನಾಗಿ ಮಾಡಿದೆ ಹಾಗೂ ರಾಷ್ಟ್ರೀಯ ಭದ್ರತೆ ಮತ್ತು ಆರ್ಥಿಕ ಬೆಳವಣಿಗೆಯನ್ನು ಬಲಪಡಿಸಿದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ರಕ್ಷಣಾ ಸಚಿವಾಲಯ ತಿಳಿಸಿದೆ.

<><*<><>*><>

ಜಮ್ಮು-ಕಾಶ್ಮೀರದ ಶೋಪಿಯಾನ್ ಜಿಲ್ಲೆಯ ಶುಕ್ರೂ ಅರಣ್ಯ ವಲಯದಲ್ಲಿಂದು ಭದ್ರತಾ ಪಡೆಗಳು ಮತ್ತು ಭಯೋತ್ಪಾದಕರ ನಡುವೆ ನಡೆದ ಗುಂಡಿನ ಚಕಮಕಿಯಲ್ಲಿ ಮೂವರು ಭಯೋತ್ಪಾದಕರು ಹತರಾಗಿದ್ದಾರೆ.  ಅರಣ್ಯ ವಲಯದಲ್ಲಿ ಭಯೋತ್ಪಾದಕರು ಅಡಗಿರುವ ಸುಳಿವನ್ನು ಆಧರಿಸಿ, ಭಾರತೀಯ ಸೇನೆ, ಜಮ್ಮು-ಕಾಶ್ಮೀರ ಪೊಲೀಸ್ ಮತ್ತು ಸಿಆರ್‌ಪಿಎಫ್‌ನ ಜಂಟಿ ತಂಡ ತೀವ್ರ ಶೋಧ ಕಾರ್ಯಾಚರಣೆ ಆರಂಭಿಸಿತು. ಈ ವೇಳೆ ಭಯೋತ್ಪಾದಕರು ಮತ್ತು ಭದ್ರತಾ ಪಡೆಗಳ ನಡುವೆ ಗುಂಡಿನ ಚಕಮಕಿ ನಡೆದು, ಮೂವರು ಉಗ್ರರು ಮೃತಪಟ್ಟಿದ್ದಾರೆ. ಶೋಧ ಕಾರ್ಯಾಚರಣೆ ಮುಂದುವರಿದಿದೆ ಎಂದು ಕಾಶ್ಮೀರ ಐಜಿಪಿ ವಿ.ಕೆ.ಬಿರ್ದಿ ತಿಳಿಸಿದ್ದಾರೆ

<><*<><>*><>

ಪಂಜಾಬ್‌ನ ಅಮೃತಸರದಲ್ಲಿ ಕಳ್ಳಬಟ್ಟಿ ಸೇವಿಸಿ ಮೃತಪಟ್ಟವರ ಸಂಖ್ಯೆ ೨೧ ಕ್ಕೆ ಏರಿಕೆಯಾಗಿದೆ. ಇನ್ನೂ ಅನೇಕರು ಆಸ್ಪತ್ರೆಗೆ ದಾಖಲಾಗಿದ್ದಾರೆ. ಅಮೃತಸರದ ಮಜಿತಾ ಕ್ಷೇತ್ರದಲ್ಲಿ ಈ ಘಟನೆ ನಡೆದಿದ್ದು, ನಿನ್ನೆ ರಾತ್ರಿ ೪ ಹಳ್ಳಿಗಳ ಜನರು ಎಥೆನಾಲ್‌ನಿಂದ  ತಯಾರಿಸಿದ ನಕಲಿ ಮದ್ಯ ಸೇವಿಸಿದ್ದಾರೆ. ಮೃತರ ಕುಟುಂಬದರನ್ನು ಭೇಟಿಯಾದ ಪಂಜಾಬ್ ಮುಖ್ಯಮಂತ್ರಿ ಭಗವಾನ್ ಸಿಂಗ್ ಮಾನ್, ಘಟನೆಗೆ ಕಾರಣರಾದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

<><*<><>*><>

ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ - ಸಿಬಿಎಸ್‌ಇ ಈ ವರ್ಷದ ೧೨ನೇ ತರಗತಿಯ ಫಲಿತಾಂಶಗಳನ್ನು ಪ್ರಕಟಿಸಿದೆ. ಈ ಬಾರಿ ಶೇಕಡಾ ೮೮.೩೯ ರಷ್ಟು ವಿದ್ಯಾರ್ಥಿಗಳು ಬೋರ್ಡ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದು, ಕಳೆದ ವರ್ಷಕ್ಕಿಂತ ಶೇಕಡಾ ೦.೪೧ ರಷ್ಟು ಉತ್ತಮ ಫಲಿತಾಂಶ ದಾಖಲಾಗಿದೆ. ಈ ವರ್ಷ ಒಟ್ಟು ೧೬ ಲಕ್ಷ ೯೨ ಸಾವಿರ ೭೯೪ ವಿದ್ಯಾರ್ಥಿಗಳು ಅಃSಇ ಪರೀಕ್ಷೆಗೆ ಹಾಜರಾಗಿದ್ದರು.

<><*<><>*><>

ಸಿಬಿಎಸ್‌ಇ-೧೨ ಮತ್ತು ೧೦ನೇ ತರಗತಿ ಪರೀಕ್ಷೆಯಲ್ಲಿ ಯಶಸ್ವಿಯಾಗಿ ಉತ್ತೀರ್ಣರಾದ ವಿದ್ಯಾರ್ಥಿಗಳನ್ನು ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಫಲಿತಾಂಶಗಳು ವಿದ್ಯಾರ್ಥಿಗಳ ದೃಢ ನಿಶ್ಚಯ, ಶಿಸ್ತು ಮತ್ತು ಕಠಿಣಶ್ರಮದ ಪ್ರತಿಬಿಂಬವಾಗಿದೆ. ಈ ಸಾಧನೆಯಲ್ಲಿ ಪ್ರಮುಖ ಪಾತ್ರ ವಹಿಸಿದ ಪೋಷಕರು, ಶಿಕ್ಷಕರು ಮತ್ತು ಇತರರ ಬೆಂಬಲ ಮತ್ತು ಕೊಡುಗೆಗಳನ್ನು ಗುರುತಿಸುವ ಮಹತ್ವವನ್ನು ಅವರು ಒತ್ತಿ ಹೇಳಿದರು.

<><*<><>*><>

ಇಂಡಿಯನ್ ಪ್ರೀಮಿಯರ್ ಲೀಗ್ ೨೦೨೫ ರ ಉಳಿದ ಪಂದ್ಯಗಳು ಇದೇ ಶನಿವಾರದಿಂದ ಪುನರಾರಂಭವಾಗಲಿವೆ. ದೇಶದ ೬ ಕಡೆ ಉಳಿದ ೧೭ ಪಂದ್ಯಗಳನ್ನು ನಡೆಸಲಾಗುತ್ತದೆ ಎಂದು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ ಬಿಸಿಸಿಐ ತಿಳಿಸಿದೆ. ಮೇ ೨೯ ರಂದು ಮೊದಲ ಕ್ವಾಲಿಫೈಯರ್ ಪಂದ್ಯ ನಡೆಯಲಿದ್ದು, ಜೂನ್ ೩ ರಂದು ಅಂತಿಮ ಪಂದ್ಯ ನಡೆಯಲಿದೆ.

<><*<><>*><>

ಇಂಡಿಯನ್ ಪ್ರೀಮಿಯರ್ ಲೀಗ್ ೨೦೨೫ ರ ಉಳಿದ ಪಂದ್ಯಗಳು ಇದೇ ಶನಿವಾರದಿಂದ ಪುನರಾರಂಭವಾಗಲಿವೆ. ದೇಶದ ೬ ಕಡೆ ಉಳಿದ ೧೭ ಪಂದ್ಯಗಳನ್ನು ನಡೆಸಲಾಗುತ್ತದೆ ಎಂದು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ ಬಿಸಿಸಿಐ ತಿಳಿಸಿದೆ. ಮೇ ೨೯ ರಂದು ಮೊದಲ ಕ್ವಾಲಿಫೈಯರ್ ಪಂದ್ಯ ನಡೆಯಲಿದ್ದು, ಜೂನ್ ೩ ರಂದು ಅಂತಿಮ ಪಂದ್ಯ ನಡೆಯಲಿದೆ.

<><*<><>*><>

ಇಂಡಿಯನ್ ಪ್ರೀಮಿಯರ್ ಲೀಗ್ ೨೦೨೫ ರ ಉಳಿದ ಪಂದ್ಯಗಳು ಇದೇ ಶನಿವಾರದಿಂದ ಪುನರಾರಂಭವಾಗಲಿವೆ. ದೇಶದ ೬ ಕಡೆ ಉಳಿದ ೧೭ ಪಂದ್ಯಗಳನ್ನು ನಡೆಸಲಾಗುತ್ತದೆ ಎಂದು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ ಬಿಸಿಸಿಐ ತಿಳಿಸಿದೆ. ಮೇ ೨೯ ರಂದು ಮೊದಲ ಕ್ವಾಲಿಫೈಯರ್ ಪಂದ್ಯ ನಡೆಯಲಿದ್ದು, ಜೂನ್ ೩ ರಂದು ಅಂತಿಮ ಪಂದ್ಯ ನಡೆಯಲಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೩೫ ಕ್ಕೆ <>*><>